# ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
## Karnataka State Electronic Development Corporation Limited
**(A Government of Karnataka Enterprise)**
**CIN No. U75112KA1976SGC003055**

ವ್ಯವಸ್ಥಾಪಕ ನಿರ್ದೇಶಕರು ಹಾಗೂ ಆಯ್ಕೆ ಪ್ರಾಧಿಕಾರ ಇವರ ನೋಂದಾಯಿತ ಕಛೇರಿ,
2ನೇ ಮಹಡಿ, ಟಿಟಿಎಂಸಿ "ಎ" ಬ್ಲಾಕ್, ಬಿಎಂಟಿಸಿ, ಶಾಂತಿನಗರ, ಕೆ.ಹೆಚ್ ರೋಡ್, ಬೆಂಗಳೂರು-560 027

ಸಂಖ್ಯೆ: ಕೆಎಸ್ಇಡಿಸಿ/ಸಿಬ್ಬಂದಿ/ವ್ಯನಿ/ಬ್ಯಾಕ್‌ಲಾಗ್-1/2016-17 ದಿನಾಂಕ. 22.11.2018

### ತಿದ್ದುಪಡಿ ನೇಮಕಾತಿ ಪ್ರಕಟಣೆ

ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತದ ಗುಲ್ಬರ್ಗಾ ಹಾಗೂ ಶಿವಮೊಗ್ಗ ಐಟಿ ಪಾರ್ಕ್‌ಗಳಲ್ಲಿ ಖಾಲಿ ಇರುವ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಕ್ಕೆ ಮೀಸಲಾತಿಯಾಗಿರುವ ಈ ಕೆಳಕಂಡ ವೃಂದದ 15 ಬ್ಯಾಕ್‌ಲಾಗ್ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಈ ಕಛೇರಿ ನೇಮಕಾತಿ ಪ್ರಕಟಣೆಯ ಅಧಿಸೂಚನೆ ಸಂಖ್ಯೆ:ಕೆಎಸ್ಇಡಿಸಿ/ಸಿಬ್ಬಂದಿ/ಆ/2016-17 ದಿನಾಂಕ 21.12.2016ರಲ್ಲಿ ಪ್ರಕಟಿಸಲಾಗಿತ್ತು.

| ಕ್ರಮ ಸಂಖ್ಯೆ | ವೃಂದ | ಪರಿಶಿಷ್ಠ ಜಾತಿ | ಪರಿಶಿಷ್ಠ ಪಂಗಡ | ಒಟ್ಟು |
|---|---|---|---|---|
| 1. | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕ) | 4 | - | 4 |
| 2. | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕೇತರ) | 4 | 1 | 5 |
| 3. | ಸಹಾಯಕ ಅಭಿಯಂತರರು | 5 | 1 | 6 |
| | ಒಟ್ಟು | 13 | 2 | 15 |

ಮೇಲಿನ ನೇರ ನೇಮಕಾತಿ ಮುಖಾಂತರ ಭರ್ತಿ ಸಲ್ಲಿಸುವ 15 ಬ್ಯಾಕ್‌ಲಾಗ್ ಹುದ್ದೆಗಳನ್ನು ಈ ಕೆಳಕಂಡಂತೆ ವರ್ಗೀಕರಿಸಲಾಗಿತ್ತು.

| ಕ್ರಮ ಸಂಖ್ಯೆ | ಗ್ರೂಪ್ | ವೃಂದ | ಪರಿಶಿಷ್ಠ ಜಾತಿ | | | | | ಪರಿಶಿಷ್ಠ ಪಂಗಡ |
|---|---|---|---|---|---|---|---|---|
| | | | ಇತರೆ | ಹೈ.ಕ | ಮಹಿಳೆ | ಗ್ರಾಮೀಣ | ಅಂವಿ | ಇತರೆ |
| 1. | ಬಿ | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕ) | - | 1 | 1 | 1 | 1 | - |
| 2. | ಬಿ | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕೇತರ) | - | 1 | 1 | 1 | 1 | 1 |
| 3. | ಸಿ | ಸಹಾಯಕ ಅಭಿಯಂತರರು | 1 | 1 | 1 | 1 | 1 | 1 |
| | | ಒಟ್ಟು | 1 | 3 | 3 | 3 | 3 | 2 |

ಅಧಿಸೂಚನೆ ಸಂಖ್ಯೆ:ಕೆಎಸ್ಇಡಿಸಿ/ಸಿಬ್ಬಂದಿ/ಆ/2016-17 ದಿನಾಂಕ .21.12.2016ರಲ್ಲಿ ಪ್ರಕಟಿಸಲಾಗಿದ್ದ 15 ಹುದ್ದೆಗಳಿಗೆ ಬದಲಾಗಿ ಕರ್ನಾಟಕ ಸರ್ಕಾರದ ಸಚಿವಾಲಯದ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಆದೇಶ ಸಂಖ್ಯೆ: ಐಟಿಡಿ 35 ಡಿಐಎಸ್ 2017 ದಿನಾಂಕ 13.11.2018ರ ಪತ್ರದಲ್ಲಿ ಕಿಯೋನಿಕ್ಸ್‌ನಲ್ಲಿ ಒಟ್ಟು ಖಾಲಿಯಿರುವ 26 ನೇರ ನೇಮಕಾತಿ ಬ್ಯಾಕ್‌ಲಾಗ್ ಹುದ್ದೆಗಳಲ್ಲಿ ಮೊದಲನೇ ಹಂತವಾಗಿ 9 ಹುದ್ದೆಗಳನ್ನು ಆದ್ಯತೆಯ ಮೇರೆಗೆ ತ್ವರಿತವಾಗಿ ತುಂಬಲು ಸಮಾಜ ಕಲ್ಯಾಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಸಕಇ 30 ಎಸ್‌ಟಿಸಿ 2018 ದಿನಾಂಕ 16.08.2017ರಲ್ಲಿ ಸಹಮತಿ ನೀಡಿರುತ್ತದೆ.

| ಕ್ರಮ ಸಂಖ್ಯೆ | ವೃಂದ | ಪರಿಶಿಷ್ಠ ಜಾತಿ | ಪರಿಶಿಷ್ಠ ಪಂಗಡ | ಒಟ್ಟು |
|---|---|---|---|---|
| 1. | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕ) | 3 | - | 3 |
| 2. | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕೇತರ) | 2 | 1 | 3 |
| 3. | ಸಹಾಯಕ ಅಭಿಯಂತರರು | 2 | 1 | 3 |
| | ಒಟ್ಟು | 7 | 2 | 9 |



ಸಹಿ/-

ಸಮಾಜ ಕಲ್ಯಾಣ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಮೊದಲನೇ ಹಂತವಾಗಿ 9 ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿಸಿದ ಹುದ್ದೆಗಳ ಸಂಖ್ಯೆಗಳಿಗನುಗುಣವಾಗಿ ಹಾಗೂ ಅಯ್ಕೆ / ನೇಮಕಾತಿಗೆ ಸಂಬಂಧಿಸಿದಂತೆ ಈ ತಿದ್ದುಪಡಿ ನೇಮಕಾತಿ ಪ್ರಕಟಣೆ ಮತ್ತು ಸಾಮಾನ್ಯ ಸೂಚನೆಗಳಲ್ಲಿ ನೀಡಲಾಗಿರುವ ಸೂಚನೆಗಳ ಹೊರತಾಗಿಯೂ ಸಂಬಂಧಪಟ್ಟ ನಿಯಮಗಳಡಿ ಸೂಕ್ತವೆನಿಸುವ ಕ್ರಮಗಳನ್ನು ತೆಗೆದುಕೊಳ್ಳುವ ಹಾಗೂ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಸರ್ಕಾರೀ ನಿಯಮಾನುಸಾರ ಯಾವುದಾದರು ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡು ಬಂದಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದ ಮೇರೆಗೆ ಈ ಕೆಳಕಂಡಂತೆ ಮೀಸಲಾತಿಯನ್ನು ಮೊದಲನೇ ಹಂತದಲ್ಲಿ 9 ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿಸಿದ ಹುದ್ದೆಗಳ ಸಂಖ್ಯೆಯ ಅನುಗುಣವಾಗಿ ಈ ಕೆಳಕಂಡಂತೆ ಮರು ವರ್ಗೀಕರಣ ಮಾಡಲಾಗಿದೆ.

| ಕ್ರಮ ಸಂಖ್ಯೆ | ಗ್ರೂಪ್ | ಹುದ್ದೆಯ ಪದನಾಮ ಮತ್ತು 2018ರ ಪರಿಷ್ಕೃತ ವೇತನ ಶ್ರೇಣಿ | ಸಮತಳ ಮೀಸಲಾತಿ | | | | ಒಟ್ಟು |
|---|---|---|---|---|---|---|---|
| | | | ಪರಿಶಿಷ್ಟ ಜಾತಿ | | | ಪರಿಶಿಷ್ಟ ಪಂಗಡ | |
| | | | ಇತರೆ | ಮಹಿಳೆ | ಗ್ರಾಮೀಣ | ಇತರೆ | |
| 1. | ಬಿ | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕ) (ರೂ. 52650-97100) | 1 | 1 | 1 | - | 3 |
| 2. | ಬಿ | ಸಹಾಯಕ ವ್ಯವಸ್ಥಾಪಕರು (ತಾಂತ್ರಿಕೇತರ) (ರೂ. 52650-97100) | 1 | 1 | - | 1 | 3 |
| 3. | ಸಿ | ಸಹಾಯಕ ಅಭಿಯಂತರರು (ರೂ. 40900-78200) | 1 | 1 | - | 1 | 3 |
| ಒಟ್ಟು | | | 3 | 3 | 1 | 2 | 9 |

**1.0 ಅರ್ಜಿ ಸಲ್ಲಿಸುವ ವಿಧಾನ:**

ಅರ್ಜಿ ಮತ್ತು ಅಧಿಸೂಚನೆಯನ್ನು ನಿಗಮದ ವೆಬ್‌ಸೈಟ್: **www.keonics.in** ನಲ್ಲಿ ಪ್ರಕಟಿಸಲಾಗುವುದು. ಅರ್ಜಿಯನ್ನು **Online** ಮುಖಾಂತರ ಅಭ್ಯರ್ಥಿಗಳು ಸಲ್ಲಿಸತಕ್ಕದ್ದು, ಇದನ್ನು ಹೊರತುಪಡಿಸಿ ಯಾವುದೇ ವಿಧದಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುವುದಿಲ್ಲ. **Online** ಅರ್ಜಿಯನ್ನು ತುಂಬಲು ಸಹಾಯಕವಾಗುವ ಸೂಚನೆಗಳನ್ನು ನಿಗಮದ ವೆಬ್‌ಸೈಟ್‌ನಲ್ಲಿ ನೀಡಲಾಗುವುದು. ಒಬ್ಬ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು **Online** ಮುಖಾಂತರ ಸಲ್ಲಿಸಬಾರದು. **Online** ನಲ್ಲಿ ಅರ್ಜಿಯನ್ನು ಸಲ್ಲಿಸಿದ ನಂತರ ಅಭ್ಯರ್ಥಿಗಳು ತಾವು **Online** ಮುಖಾಂತರ ಸಲ್ಲಿಸಿದ ಅರ್ಜಿಯ ಒಂದು ಮುದ್ರಿತ ಪ್ರತಿಯನ್ನು ತೆಗೆದುಕೊಂಡು, ಇ-ಪಾವತಿ ಸೌಲಭ್ಯವಿರುವ ಅಂಚೆ ಕಛೇರಿಯಲ್ಲಿ ಮುದ್ರಿತ ಅರ್ಜಿ ಪ್ರತಿಯನ್ನು ತೋರಿಸಿ, ನಿಗದಿತ ಅರ್ಜಿ ಶುಲ್ಕ ಮತ್ತು ಸೇವಾ ಶುಲ್ಕವನ್ನು ಅಭ್ಯರ್ಥಿಗಳು ಪಾವತಿಸತಕ್ಕದ್ದು. ಅಂಚೆ ಕಛೇರಿಯಲ್ಲಿ ದಿನಾಂಕ **21.12.2018**ರ ಕಛೇರಿ ವ್ಯವಹಾರದ ವೇಳೆಯ ಮುಕ್ತಾಯದ ಸಮಯದೊಳಗೆ ಶುಲ್ಕವನ್ನು ಪಾವತಿಸಬಹುದಾಗಿರುತ್ತದೆ.

<u>ಸೂಚನೆ:</u> ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸದೇ ನೇರವಾಗಿ ಕೊರಿಯರ್, ನೋಂದಾಯಿತ ಅಂಚೆ, ಮುದ್ದಾಂ, ಇತ್ಯಾದಿ ವಿಧಾನಗಳ ಮುಖಾಂತರ ಕಛೇರಿಗೆ ಕಳುಹಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

<u>ವಿಶೇಷ ಸೂಚನೆ:</u> ಅಧಿಸೂಚನೆ ಸಂಖ್ಯೆ:ಕೆಎಸ್‌ಇಡಿಸಿ/ಸಿಬ್ಬಂದಿ/ಆ/2016-17 ದಿನಾಂಕ **21.12.2016**ರ ನೇಮಕಾತಿ ಪ್ರಕಟಣೆಗೆ ಸಂಬಂಧಿಸಿದಂತೆ ಈಗಾಗಲೇ ಈ ಹಿಂದೆ ಅರ್ಜಿ ಸಲ್ಲಿಸಿದ್ದಲ್ಲಿ ಪುನ: ಅರ್ಜಿ ಸಲ್ಲಿಸಬೇಕಾಗಿರುವುದಿಲ್ಲ.

**1.1** ಅರ್ಜಿ ಸಲ್ಲಿಸುವಾಗ ಜನ್ಮ ದಿನಾಂಕ ದೃಢೀಕರಿಸುವ ಪ್ರಮಾಣ ಪತ್ರ, ಶೈಕ್ಷಣಿಕ ಪ್ರಮಾಣ ಪತ್ರಗಳು, ಜಾತಿ ದೃಢೀಕರಿಸುವ ಪ್ರಮಾಣ ಪತ್ರವನ್ನು ಸ್ಕ್ಯಾನ್ ಮಾಡಿ ನಿಗಮದ ವೆಬ್‌ಸೈಟ್‌ಗೆ ಅರ್ಜಿ ಸಲ್ಲಿಸುವ ವೇಳೆಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು, ಅಭ್ಯರ್ಥಿಯು ಯಾವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ವೇಳೆ ಅಪ್‌ಲೋಡ್ ಮಾಡಿರುತ್ತಾರೆಯೋ ಅದೇ ಪ್ರಮಾಣ ಪತ್ರವನ್ನು ಎಲ್ಲಾ ಹಂತದಲ್ಲೂ ಪರಿಗಣನೆಗೆ ತೆಗೆದುಕೊಳ್ಳಲಾಗುವುದು. ಇದನ್ನು ಯಾವ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

**1.2** ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ – **22.11.2018**
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ – **20.12.2018**
ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ – **21.12.2018** (ಅಂಚೆ ಕಛೇರಿಯ ಕಾರ್ಯದ ವೇಳೆಯೊಳಗೆ)

2.0 ಶುಲ್ಕ (Fee):

ರೂ. 100/- + ರೂ. 20/- ಸೇವಾ ಶುಲ್ಕ (ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ)

3.0 ಲಿಖಿತ ಪರೀಕ್ಷೆ:

ಯಾವುದೇ ರೀತಿಯ ಲಿಖಿತ ಪರೀಕ್ಷೆ ಇರುವುದಿಲ್ಲ.

4.0 ಅರ್ಹತೆ ಮತ್ತು ನಿಬಂಧನೆಗಳು:

4.1 ವಿದ್ಯಾರ್ಹತೆ: ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಈ ಕೆಳಕಂಡ ವಿದ್ಯಾರ್ಹತೆಯನ್ನು ಅಭ್ಯರ್ಥಿಯು ಹೊಂದಿರಬೇಕು.

| | | |
|---|---|---|
| 4.1.1 | Assistant Manager (Technical) | 1. Graduate in Engineering or Science or Diploma in Electronics / Electrical. |
| 4.1.2 | Assistant Manager (Non Technical) | 1. Degree from any university recognized by Law in India.. |
| 4.1.3 | Assistant Engineer | 1. B.Sc., or Diploma in Electronics or Electrical or SSLC with ITI certification course in Electronics / Electrical or its equivalent. |

5.0 ವಯೋಮಿತಿ:

ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಗರಿಷ್ಠ 40 ವರ್ಷ ವಯೋಮಿತಿಯನ್ನು ಮೀರಿರಬಾರದು. ಆದಾಗ್ಯೂ, ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 6(3)(ಐ) ಅನ್ವಯ ವಿಧವೆಯರಿಗೆ 10 ವರ್ಷಗಳ ವಯೋಮಿತಿಯಲ್ಲಿ ವಿನಾಯಿತಿ ನೀಡಲಾಗುವುದು.

6.0 ಸ್ವೀಕೃತ ಅರ್ಜಿಗಳ ಪರಾಮರ್ಶೆ / ಆಯ್ಕೆ ವಿಧಾನ:

ಕರ್ನಾಟಕ ರಾಜ್ಯ ನಾಗರೀಕ ಸೇವಾ (ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರಿಗೆ ಕಾಯ್ದಿರಿಸಿದ ಹುದ್ದೆಗಳಲ್ಲಿ ಭರ್ತಿಯಾಗದೆ ಖಾಲಿ ಇರುವ ಹುದ್ದೆಗಳಿಗೆ)(ವಿಶೇಷ ನೇಮಕಾತಿ) ನಿಯಮಗಳು, 2001 ಅನ್ವಯ ಸ್ವೀಕರಿಸಲಾದ Online ಅರ್ಜಿಗಳನ್ನು ಹುದ್ದೆವಾರು ಕ್ರೋಢೀಕರಿಸಿ, ಭರ್ತಿ ಮಾಡಿರುವ ಮಾಹಿತಿ/ವಿವರಗಳನ್ನು ನಿಯಮಾನುಸಾರ ಪರಿಶೀಲಿಸಿ 1:1 (ಖಾಲಿ ಹುದ್ದೆ : ಅಭ್ಯರ್ಥಿ) ಅನುಪಾತದಲ್ಲಿ ಪ್ರವರ್ಗವಾರು ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಒಟ್ಟು ಶೇಕಡಾವಾರು ಅಂಕಗಳನ್ನು ಪರಿಗಣಿಸಿ, 18 ವರ್ಷದಿಂದ 28 ವರ್ಷ ವಯೋಮಿತಿಯುಳ್ಳ (29 ವರ್ಷದೊಳಗಿನವರು) ಅಭ್ಯರ್ಥಿಗಳ ಒಂದು ಜೇಷ್ಠತಾ ಪಟ್ಟಿಯನ್ನು ಹಾಗೂ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಇನ್ನೊಂದು ಜೇಷ್ಠತಾ ಪಟ್ಟಿಯನ್ನು ತಯಾರಿಸಿ 29 ವರ್ಷದಿಂದ 40 ವರ್ಷಗಳ ವಯೋಮಿತಿಯ ಅಭ್ಯರ್ಥಿಗಳ ಜೇಷ್ಠತಾ ಪಟ್ಟಿಯಲ್ಲಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ (Provisional Select List) ಯನ್ನು ಮೆರಿಟ್ ಆಧಾರದಲ್ಲಿ ತಯಾರಿಸಲಾಗುವುದು. ಆದರೆ, ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆಯ ನಂತರವೇ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಿ ಪ್ರಕಟಿಸಲಾಗುವುದು. ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ನಿಗಮದ ಯಾವುದೇ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸಲು ಸ್ಥಳ ನಿಯುಕ್ತಿಗೊಳಿಸಲಾಗುವುದು.

ವಿಶೇಷ ಸೂಚನೆಗಳು:-

(i) ಆಯ್ಕೆ ಪಟ್ಟಿಯಲ್ಲಿ ಅಭ್ಯರ್ಥಿಯ ಹೆಸರನ್ನು ಸೇರಿಸಿದ ಮಾತ್ರಕ್ಕೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕನ್ನು ನೀಡುವುದಿಲ್ಲ.

(ii) ಶೇಕಡಾವಾರು ಅಂಕಗಳನ್ನು ಲೆಕ್ಕ ಹಾಕುವಾಗ ಪಠ್ಯ ವಿಷಯದಲ್ಲಿನ ಯಾವುದೇ ವಿಷಯದ ಅಂಕಗಳನ್ನು ಹೊರತುಪಡಿಸಲಾಗುವುದಿಲ್ಲ. ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಯು ಗಳಿಸಿರುವ ಎಲ್ಲಾ ವಿಷಯಗಳಲ್ಲಿನ ಒಟ್ಟು ಅಂಕಗಳು ಮತ್ತು ಆಯಾ ಪರೀಕ್ಷಾ ಮಂಡಳಿ ನಿಗದಿಪಡಿಸಿರುವ ಗರಿಷ್ಠ ಅಂಕಗಳನ್ನು ಪರಿಗಣಿಸಿ ಅಭ್ಯರ್ಥಿಗಳ ಶೇಕಡವಾರು ಅಂಕಗಳನ್ನು ನಿಗದಿಪಡಿಸಲಾಗುವುದು.

7.0 ಮೂಲ ದಾಖಲೆ / ಪ್ರಮಾಣ ಪತ್ರಗಳ ಪರಿಶೀಲನೆ:

ಸಂಕ್ಷಿಪ್ತಗೊಳಿಸಿದ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿ/ ವಿವರಗಳಿಗೆ ಪೂರಕವಾಗಿ ವಯಸ್ಸು, (ಜನ್ಮ ದಿನಾಂಕ ತಿಳಿಯಲು ಎಸ್.ಎಸ್.ಎಲ್.ಸಿ ಅಂಕಪಟ್ಟಿ/ ಶಾಲಾ ದಾಖಲಾತಿ ಪ್ರಮಾಣ ಪತ್ರಗಳು) ಶೈಕ್ಷಣಿಕ ಅರ್ಹತೆ, ಮೀಸಲಾತಿ, ಇತ್ಯಾದಿ ಬಗ್ಗೆ ಮೂಲ ದಾಖಲೆ/ ಮೂಲ ಪ್ರಮಾಣ ಪತ್ರಗಳು ಮತ್ತು ಇವುಗಳ ಒಂದು ಜೆರಾಕ್ಸ್ ಪ್ರತಿಯನ್ನು ಸೂಚಿತ ದಿನಾಂಕದಂದು ಸಂಬಂಧಿಸಿದ ಅಧಿಕಾರಿಗಳ ಎದುರು ಪರಿಶೀಲನೆಗೆ ಕಡ್ಡಾಯವಾಗಿ ಹಾಜರುಪಡಿಸಬೇಕು. ಸದರಿ ಮೂಲ ದಾಖಲೆ/ ಪ್ರಮಾಣ ಪತ್ರಗಳನ್ನು ಹಾಜರುಪಡಿಸಲು ಯಾವುದೇ ಕಾರಣಕ್ಕೂ ಮತ್ತು ಯಾವುದೇ ಸನ್ನಿವೇಶದಲ್ಲಿಯೂ ಕಾಲ ವಿಸ್ತರಣೆ ನೀಡಲಾಗುವುದಿಲ್ಲ. ಅಭ್ಯರ್ಥಿಯು ತನ್ನ ಅರ್ಜಿ ನಮೂನೆಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳನ್ನು ನಿಯಮಾನುಸಾರ ಪರಿಗಣಿಸಲಾಗುವುದು. ಒಂದು ವೇಳೆ ನಮೂದಿಸಿರುವ ಮಾಹಿತಿಗೆ ವ್ಯತಿರಿಕ್ತ ದಾಖಲೆ/ ಪ್ರಮಾಣ ಪತ್ರಗಳನ್ನು ಸಲ್ಲಿಸಿದಲ್ಲಿ ಅಂತಹ ದಾಖಲೆ/ ಪ್ರಮಾಣ ಪತ್ರಗಳನ್ನು ಪರಿಗಣನೆಗೆ ತೆಗೆದುಕೊಂಡು ಬದಲಾವಣೆ ಮಾಡಲಾಗುವುದಿಲ್ಲ. ಮೂಲ ದಾಖಲೆ/ ಪ್ರಮಾಣ ಪತ್ರಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

7.1. ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಹುದ್ದೆಗೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಆಯಾ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಗರಿಷ್ಠ ಅಂಕಗಳನ್ನು ಹಾಗೂ ಅಭ್ಯರ್ಥಿಯು ಎಲ್ಲಾ ವಿಷಯಗಳಲ್ಲಿ ಗಳಿಸಿರುವ ಒಟ್ಟು ಅಂಕಗಳನ್ನು (ಎಲ್ಲಾ ವಾರ್ಷಿಕ/ಸೆಮಿಸ್ಟರ್ ಪರೀಕ್ಷೆಗಳ ಅಂಕಗಳನ್ನು ಕೂಡಿ) ತನ್ನ ಅರ್ಜಿಯಲ್ಲಿ ಸರಿಯಾಗಿ ಮತ್ತು ಸ್ಪಷ್ಟವಾಗಿ ನಮೂದಿಸುವುದು. ಅಸ್ಪಷ್ಟ / ತಪ್ಪು / ಅಪೂರ್ಣ ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

7.2 ಅಭ್ಯರ್ಥಿಯು ಅರ್ಜಿ ನಮೂನೆಯಲ್ಲಿ ಮೀಸಲಾತಿ ಮತ್ತು ಕೋರುವ ಯಾವುದೇ ಸೌಲಭ್ಯಗಳಿಗೆ ಸಂಬಂಧಿಸಿದಂತೆ ವಿವರಗಳನ್ನು ಅರ್ಜಿಯಲ್ಲಿ ನೀಡಿರುವ ಸಂಬಂಧಿಸಿದ ಕಾಲಂಗಳಲ್ಲಿ ತಪ್ಪದೇ ನಮೂದಿಸಬೇಕು. ಒಂದು ವೇಳೆ ಸದರಿ ವಿವರಗಳನ್ನು ಅರ್ಜಿಯಲ್ಲಿ ನಮೂದಿಸದಿದ್ದರೆ ಅಂತಹ ಅಭ್ಯರ್ಥಿಯು ಮೀಸಲಾತಿ/ಕೋರುವ ಇತರೆ ಸೌಲಭ್ಯಗಳಿಂದ ವಂಚಿತರಾಗುತ್ತಾರೆ.

**8.0 ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಲ್ಲಿಸಬೇಕಾದ ಮೂಲ ದಾಖಲೆ/ಪ್ರಮಾಣ ಪತ್ರಗಳ ವಿವರ ಕೆಳಕಂಡಂತಿದೆ:**

ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರ ಇತ್ಯಾದಿ ಮೀಸಲಾತಿ ಕುರಿತು ಮೂಲ ಪ್ರಮಾಣ ಪತ್ರಗಳನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು ಮತ್ತು ಸೂಚಿತ ದಿನಾಂಕದಂದು ಸದರಿ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಆಯ್ಕೆ ಪ್ರಾಧಿಕಾರದ ಎದುರು ಪರಿಶೀಲನೆಗೆ ತಪ್ಪದೆ ಹಾಜರುಪಡಿಸತಕ್ಕದ್ದು.

| | |
|---|---|
| **8.1** | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಡಿ" ರಲ್ಲಿ ಪಡೆದಿರಬೇಕು. |
| **8.2** | ಪ್ರಸ್ತುತ ಸರ್ಕಾರಿ (ಕೇಂದ್ರ ಸರ್ಕಾರ/ಕರ್ನಾಟಕ ರಾಜ್ಯ ಸರ್ಕಾರ/ಇತರೆ ರಾಜ್ಯಗಳು) ಹಾಗೂ ಸಂಸ್ಥೆಗಳಲ್ಲಿ ಅಥವಾ ಪ್ರಾಧಿಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡಿರಬೇಕು ಹಾಗೂ ಮೂಲ ದಾಖಲೆಗಳ ಪರಿಶೀಲನೆಯ ವೇಳೆ ಅವುಗಳನ್ನು ಹಾಜರುಪಡಿಸತಕ್ಕದ್ದು. |
| **8.3** | ವಿಧವೆಯರು ಈ ಕೆಳಕಂಡ ಮೂಲ ದಾಖಲಾತಿಗಳನ್ನು ಪರಿಶೀಲನೆಯ ವೇಳೆ ಹಾಜರುಪಡಿಸತಕ್ಕದ್ದು. |
| | (ಅ) ಸಕ್ಷಮ ಪ್ರಾಧಿಕಾರದಿಂದ ಪಡೆದ ಪತಿಯ ಮರಣದ ಸಮರ್ಥನೆ ಪತ್ರ |
| | (ಆ) ಸಕ್ಷಮ ಪ್ರಾಧಿಕಾರದಿಂದ ಪಡೆದ ಜೀವಿತ ಸದಸ್ಯರ ದೃಢೀಕರಣ ಪತ್ರ |
| | (ಇ) ಪುನರ್ ವಿವಾಹ ಮಾಡಿಕೊಂಡಿಲ್ಲವೆಂಬ ಬಗ್ಗೆ ಜ್ಯುಡಿಶಿಯಲ್ ಮೊದಲನೆ ದರ್ಜೆ ನ್ಯಾಯಾಧೀಶರ ಮುಂದೆ ಪ್ರಮಾಣೀಕರಿಸಿದ ಪ್ರಮಾಣ ಪತ್ರ. |
| **8.4** | ಅವಶ್ಯವೆಂದು ಭಾವಿಸುವ ಇನ್ನಿತರ ಮೂಲ ದಾಖಲೆ/ಪ್ರಮಾಣ ಪತ್ರಗಳು. |

**9.0 ಗಮನಿಸಬೇಕಾದ ಬಹು ಮುಖ್ಯ ಅಂಶಗಳು**

| | |
|---|---|
| **9.1** | ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಚಿಸಿದಲ್ಲಿ, ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸತಕ್ಕದ್ದು. |
| **9.2** | ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ. |

| | |
|---|---|
| 9.3 | ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳತಕ್ಕದ್ದು. |
| 9.4 | ಅಭ್ಯರ್ಥಿಗಳು ನಿಗದಿತ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳ ಆಧಾರದ ಮೇಲೆ ಅವರ ಅರ್ಹತೆಯನ್ನು ಪರಿಗಣಿಸಿ 1:1 (ಖಾಲಿ ಹುದ್ದೆ : ಅಭ್ಯರ್ಥಿ) ಅನುಪಾತದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸುವುದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು ನಿಗದಿತ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು. |
| 9.5 | ಪ್ರವರ್ಗದ ಮೀಸಲಾತಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ಅರ್ಜಿಯಲ್ಲಿ ಸಂಬಂಧಿಸಿದ ಪ್ರವರ್ಗದ ಕಾಲಂ ಅನ್ನು ಕಡ್ಡಾಯವಾಗಿ ನಮೂದಿಸಬೇಕು. ಈ ಕಾಲಂ ಅನ್ನು ಭರ್ತಿ ಮಾಡದೆ ಖಾಲಿ ಬಿಟ್ಟಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಯಾವುದೇ ಹಂತದಲ್ಲಿ ಅಭ್ಯರ್ಥಿಯು ತಾನು ಹೊಂದಿರುವ ಪ್ರವರ್ಗದ ಕುರಿತು ಮಾಹಿತಿಯನ್ನು ಹೊಸದಾಗಿ ಸೇರ್ಪಡೆ ಮಾಡಲು ಅಥವಾ ಬದಲಾವಣೆ ಮಾಡಲು ಅವಕಾಶವಿಲ್ಲ. |
| 9.6 | ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಅಭ್ಯರ್ಥಿ ಸಹಿ ಇಲ್ಲದ ಮತ್ತು ಅಭ್ಯರ್ಥಿಯ ಭಾವಚಿತ್ರ ಅಂಟಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ತತ್ಸಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ. |
| 9.7 | ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಹಾಗೂ ಸಮಯದ ನಂತರ ಸ್ವೀಕೃತವಾದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಅಥವಾ ಸ್ವೀಕೃತವಾಗದೇ ಇರುವುದಕ್ಕೆ ಆಯ್ಕೆ ಪ್ರಾಧಿಕಾರವು ಜವಾಬ್ದಾರಿಯಲ್ಲ. |
| 9.8 | ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ. |
| 9.9 | ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಯು ಸಲ್ಲಿಸಿದ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 9.10 | ಅಭ್ಯರ್ಥಿಯು ಸಹಾಯಕ ವ್ಯವಸ್ಥಾಪಕರು (ತಾಂತ್ರಿಕ), ಸಹಾಯಕ ವ್ಯವಸ್ಥಾಪಕರು (ತಾಂತ್ರಿಕೇತರ) ಮತ್ತು ಸಹಾಯಕ ಅಭಿಯಂತರರು ಈ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸಿ, ಈ ಎಲ್ಲಾ ಹುದ್ದೆಗಳ ಅರ್ಜಿಗಳಲ್ಲಿ ಭಿನ್ನ ಭಿನ್ನವಾದ ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಯು ಸಲ್ಲಿಸಿರುವ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 9.11 | ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು. |
| 9.12 | ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ. |
| 9.13 | ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ. |
| 9.14 | ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ. |
| 9.15 | ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳಾ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ. |
| 9.16 | ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳು ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ. |

| | |
|---|---|
| **9.17** | ಅಭ್ಯರ್ಥಿಯು ತಪ್ಪು ಮಾಹಿತಿಗಳನ್ನು ಅರ್ಜಿಯಲ್ಲಿ ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು. |
| **9.18** | ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಮಗಳು, ಸರಕಾರದ ನಿರ್ದೇಶನಗಳು, ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ. |
| **9.19** | ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡು ಬಂದಲ್ಲಿ ಬದಲಾವಣೆ ಮಾಡಲಾಗುವುದು ಮತ್ತು ಬದಲಾದ ವಿವರಗಳನ್ನು ನಿಗಮದ ವೆಬ್‌ಸೈಟ್: **www.keonics.in** ನಲ್ಲಿ ಪ್ರಕಟಿಸಲಾಗುವುದು. |

ಸ್ಥಳ : ಬೆಂಗಳೂರು
ದಿನಾಂಕ : 22.11.2018

ವ್ಯವಸ್ಥಾಪಕ ನಿರ್ದೇಶಕರು ಹಾಗೂ ಆಯ್ಕೆ ಪ್ರಾಧಿಕಾರ,
ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ,
ಬೆಂಗಳೂರು.